**1 ನೇ ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ಬಂಗಾರಪೇಟೆ**

**ಸಿಸಿ ಸಂಖ್ಯೆ: 1893/2022** **ಚಾಸಾಃ** 02 **ಪ್ರಾಸಾಃ** 02

**ಸಾಕ್ಷಿಯನ್ನು ದಿಃ 3.7.2025 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

| | |
|---|---|
| ಹೆಸರುಃ | ಅರುಣ್ ಕುಮಾರ್ |
| ತಂದೆ ಹೆಸರುಃ | ನಾರಾಯಣ |
| ವಯಸ್ಸುಃ | 42 |
| ವೃತ್ತಿಃ | ಚಾಲಕ |
| ವಾಸ ಸ್ಥಳಃ | ದಾಸರಹೊಸಳ್ಳಿ |

**ಮುಖ್ಯ ವಿಚಾರಣೆಃ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ**

ಸಾಕ್ಷಿಗೆ ನಿ ಪಿ 1 ನ್ನು ತೋರಿಸಿದ್ದು, ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಸಾಕ್ಷಿಯ ಸಹಿ ನಿ ಪಿ 1(ಬಿ) ಎಂದು ಗುರುತಿಸಲಾಯಿತು.

ಸಾಕ್ಷಿಗೆ ನಿ ಪಿ 2 ನ್ನು ತೋರಿಸಿದ್ದು, ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಸಾಕ್ಷಿಯ ಸಹಿ ನಿ ಪಿ 2(ಬಿ) ಎಂದು ಗುರುತಿಸಲಾಯಿತು.

ಸಾಕ್ಷಿಗೆ ನಿ ಪಿ 3 ನ್ನು ತೋರಿಸಿದ್ದು, ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಸಾಕ್ಷಿಯ ಸಹಿ ನಿ ಪಿ 3(ಬಿ) ಎಂದು ಗುರುತಿಸಲಾಯಿತು.

ಸದರಿ ಸಹಿಗಳನ್ನು ಯಾವ ವಿಚಾರಕ್ಕೆ ಮಾಡಿದ್ದೇನೆ ಎಂದು ನೆನಪಿಲ್ಲ. ಸದರಿ ಸಹಿಗಳನ್ನು ಪೋಲೀಸರ ಕೋರಿಕೆ ಮೇರೆಗೆ ಸಹಿ ಮಾಡಿರುತ್ತೇನೆ.

ಪೋಲೀಸರು ನನ್ನ ಸಮಕ್ಷಮ ಯಾವುದೇ ಮಹಜರು ಮಾಡಿಲ್ಲ. ನಾನು ಪೋಲೀಸರ ಜೊತೆ ಯಾವುದೇ ಧಾಳಿಯಲ್ಲಿ ಪಾಲ್ಗೊಂಡಿಲ್ಲ. ನಾನು ಪೋಲೀಸರಿಗೆ ಯಾವುದೇ ಹೇಳಿಕೆ ನೀಡಿಲ್ಲ.

(ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಬೇಕೆಂದು ಎ.ಪಿ.ಪಿ.ರವರು ಕೋರಿರುತ್ತಾರೆ. ಅದರಂತೆ ಅನುಮತಿ ನೀಡಿದೆ.)

**ಪಾಟೀ ಸವಾಲುಃ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ**

ದಿನಾಂಕ 18.7.2021 ರಂದು ಮಧ್ಯಾಹ್ನ 2.30 ರ ಸಮಯದಲ್ಲಿ ನಾನು ಕೇತಗಾನಹಳ್ಳಿ ಪಂಚಾಯ್ತಿಯ ಪುತ್ರಸೊಣ್ಣೇನಹಳ್ಳಿ ಗ್ರಾಮದಲ್ಲಿರುವ ಪೆದ್ದಲಪ್ಪ ರವರಿಗೆ ಸೇರಿದ ನೀಲಗಿರಿ ತೋಪಿದಲ್ಲಿ ಧಾಳಿ ಮಾಡಿದಾಗ ಚಾಸಾ 1 ರವರ ಜೊತೆ ಹೋಗಿದ್ದು, ಆಗ ಆರೋಪಿಯು ಅಕ್ರಮವಾಗಿ ಕಳ್ಳಬಟ್ಟಿ ತಯಾರಿಕೆಯಲ್ಲಿ ಸಿದ್ಧಪಡಿಸಲಾದ 25 ಲೀಟರಿನಷ್ಟು ಬೆಲ್ಲದ ಕೊಳೆ, 3 ಲೀಟರಿನಷ್ಟು ಕಳ್ಳಬಟ್ಟಿ ಸಾರಾಯಿ ಮತ್ತು ಇತರೆ ಪರಿಕರಣಗಳನ್ನು ಮಾರಾಟ ಮಾಡುವ ಉದ್ದೇಶ ಹೊಂದಿದ್ದ ಎಂದರೆ ಸರಿಯಲ್ಲ. ಸದರಿ ವಸ್ತುಗಳನ್ನು ನನ್ನ ಮತ್ತು ಚಾಸಾ 3 ರವರ ಸಮಕ್ಷಮ ಅಮಾನತ್ತು ಪಡಿಸಿಕೊಂಡರು ಎಂದರೆ ಸರಿಯಲ್ಲ.

ನನ್ನ ಮತ್ತು ಚಾಸಾ 3 ರವರ ಸಮಕ್ಷಮ ಮಧ್ಯಾಹ್ನ 2.30–3.30 ರವರೆಗೆ ದಿ.18.7.2023 ವರೆಗೂ ನಿ ಪಿ 2 ರಂತೆ ಮಹಜರು ಮಾಡಿರುತ್ತಾರೆ ಎಂದರೆ ಸರಿಯಲ್ಲ. ನಿ ಪಿ 1 ರಂತೆ ಶೋಧನಾ ಸಮುಚಿತ ಆಧಾರವನ್ನು ತಯಾರು ಮಾಡಿರುತ್ತಾರೆ ಎಂದರೆ ಸರಿಯಲ್ಲ. ನಿ ಪಿ 3 ರಂತೆ ಮಾದರಿ ಸೀಲಿನ ನಕಲು ತಯಾರು ಮಾಡಿದ್ದಾರೆ ಎಂದರೆ ಸರಿಯಲ್ಲ.

ನಾನು ಪೋಲೀಸರಿಗೆ ಹೇಳಿಕೆ ಕೊಟ್ಟಿದ್ದೇನೆ ಎಂದರೆ ಸರಿಯಲ್ಲ. ಸಾಕ್ಷಿಗೆ ತನ್ನ ಹೇಳಿಕೆಯನ್ನು ಯಥಾವತ್ತಾಗಿ ಓದಿ ಹೇಳಲಾಗಿ ನಿರಾಕರಿಸಿದ ಕಾರಣ ತನ್ನ ಹೇಳಿಕೆಯ ಭಾಗವನ್ನು ನಿ ಪಿ **5** ಎಂದು ಗುರುತಿಸಲಾಯಿತು. ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದಃ</u>**

ಪಾಟೀ ಸವಾಲು ಇರುವುದಿಲ್ಲ ಎಂದು ನಿವೇದಿಸಿಕೊಂಡಿರುತ್ತಾರೆ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆ ಮೇರೆಗೆ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸರಿ ಇದೆ.

**(ಚಂದ್ರಶೇಖರ್ ಅಲಬೂರ್)**

1 ನೇ ಅಪರ ಸಿವಿಲ್ ನ್ಯಾಯಾಧೀಶರು

ಮತ್ತು ಜೆ.ಎಂ.ಎಫ್.ಸಿ, ಬಂಗಾರಪೇಟೆ